# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 562 |
| ಸದಸ್ಯರ ಹೆಸರು | : | ಶ್ರೀ ಸಿ.ಟಿ. ರವಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಚಿಕ್ಕಮಗಳೂರು ತಾಲ್ಲೂಕು, ತೇಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಂಪುರ, ತೇಗೂರು, ಆದಿಶಕ್ತಿ ನಗರ ನಲ್ಲೂರು ಗ್ರಾಮಗಳಲ್ಲಿ ಸುಮಾರು 40-50 ವರ್ಷಗಳಿಂದ ಮನೆ ನಿರ್ಮಿಸಿಕೊಂಡು ವಾಸವಿರುವ ಕುಟುಂಬಗಳಿಗೆ ಇ-ಸ್ವತ್ತು ವಿತರಣೆ ಮಾಡದೇ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಇ-ಸ್ವತ್ತು ವಿತರಣೆ ಮಾಡದೆ ಇರಲು ಕಾರಣಗಳೇನು; ವಿವರ ಒದಗಿಸುವುದು; | ಇ-ಸ್ವತ್ತು ವಿತರಣೆ ಮಾಡದೆ ಇರಲು ಈ ಕೆಳಕಂಡ ಕಾರಣಗಳಿರುತ್ತವೆ.<br>ಚಿಕ್ಕಮಗಳೂರು ತಾಲ್ಲೂಕು, ತೇಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ:<br>• ಆದಿಶಕ್ತಿ ನಗರ ಗ್ರಾಮಕ್ಕೆ ಸಂಬಂಧಿಸಿದಂತೆ ಕಂದಾಯ ಇಲಾಖೆಯಿಂದ ನೀಡಲಾಗಿದೆ ಎನ್ನುವ ಹಕ್ಕುಪತ್ರಗಳಿಗೂ ವಾಸ್ತವದಲ್ಲಿನ ಮನೆಗಳ ಸಂಖ್ಯೆಗೆ ಬಹಳಷ್ಟು ವ್ಯತ್ಯಾಸ ಇರುವುದು ಕಂಡುಬರುತ್ತಿದೆ.<br>• ರಾಂಪುರ ಗ್ರಾಮಕ್ಕೆ ಸಂಬಂಧಿಸಿದಂತೆ ಸರ್ಕಾರಿ ಗುಂಡುತೋಪು ಜಾಗದಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿರುವುದಕ್ಕೆ ಸಂಬಂಧಿಸಿದಂತೆ ಕಂದಾಯ ಇಲಾಖೆಯಿಂದ ಕ್ರಮ ವಹಿಸಬೇಕಾಗಿರುತ್ತದೆ.<br>• ನಲ್ಲೂರು ಗ್ರಾಮಕ್ಕೆ ಸಂಬಂಧಿಸಿದಂತೆ ಹುಲ್ಲುಬನ್ನಿ ಜಾಗದಲ್ಲಿ ಹಾಗೂ ಸರ್ವೆ ನಂಬರ್ 266/3, 267,268 ಗಳಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿರುವುದಕ್ಕೆ ಕ್ರಮ ವಹಿಸಬೇಕಾಗಿರುತ್ತದೆ. |
| (ಇ) | ಈ ಗ್ರಾಮಗಳಲ್ಲಿ ಇ-ಸ್ವತ್ತು ವಿತರಣೆ ಇರುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಈ ಗ್ರಾಮಗಳಲ್ಲಿ ಇ-ಸ್ವತ್ತು ವಿತರಣೆ ಇರುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ:-<br>• ಚಿಕ್ಕಮಗಳೂರು ತಾಲ್ಲೂಕು, ತೇಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಂಪುರ, ತೇಗೂರು, ಆದಿಶಕ್ತಿ ನಗರ, ನಲ್ಲೂರು ಗ್ರಾಮಗಳಲ್ಲಿ ಮನೆ ನಿರ್ಮಿಸಿಕೊಂಡು ವಾಸವಿರುವ ಕುಟುಂಬಗಳಿಗೆ ಕಂದಾಯ ಇಲಾಖೆಯಿಂದ ಹಕ್ಕುಪತ್ರಗಳನ್ನು ವಿತರಣೆಯನ್ವಯ ಇ-ಸ್ವತ್ತು ವಿತರಣೆಗೆ ಕ್ರಮ ವಹಿಸಲಾಗುವುದು. |

| | | |
|---|---|---|
| | | • ಹಕ್ಕು ಪತ್ರಗಳ ಸಂಬಂಧದ ವಾಸ್ತವ ಸಮಸ್ಯೆಗಳ ಬಗ್ಗೆ ಅಗತ್ಯ ಪ್ರಸ್ತಾವನೆಯನ್ನು ಕಂದಾಯ ಇಲಾಖೆಗೆ ಸಲ್ಲಿಸಲು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯಿಂದ ಕ್ರಮ ವಹಿಸಲಾಗುತ್ತದೆ. |
| (ಈ) | ಯಾವ ಕಾಲಮಿತಿಯೊಳಗೆ ಸದರಿ ಗ್ರಾಮಗಳ ಗ್ರಾಮಸ್ಥರಿಗೆ ಇ-ಸ್ವತ್ತು ವಿತರಿಸಲಾಗುವುದು? (ವಿವರ ಒದಗಿಸವುದು) | ಕಂದಾಯ ಇಲಾಖೆಯಿಂದ ಹಕ್ಕುಪತ್ರಗಳ ವಿತರಣೆ ಹಾಗೂ ವಾಸ್ತವ ಸಮಸ್ಯೆಗಳ ಪರಿಹಾರದ ನಂತರದಲ್ಲಿ ಸದರಿ ಗ್ರಾಮಸ್ಥರಿಗೆ ಇ-ಸ್ವತ್ತು ವಿತರಿಸಲು ಕ್ರಮ ವಹಿಸಲಾಗುವುದು. |

ಸಂಖ್ಯೆ: ಗ್ರಾಅಪ 672 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.